ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ

(ಕೆಲವು ಜಮೀನುಗಳ ಪರಭಾರೆ ನಿಷೇಧ) ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

573 (847) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಕೆಲವು ಜಮೀನುಗಳ ಪರಭಾರೆ ನಿಷೇದ) ಕಾಯಿದೆ 1979ರಡಿಯಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವ್ಯಕ್ತಿಗಳಿಗೆ ಮಂಜೂರಾದ ಜಮೀನುಗಳಿಗೆ ಅನ್ವಯಿಸುತ್ತದೆ ಎಂಬ ಅಂಶ ಸರ್ಕಾರದ ಗಮನದಲ್ಲಿದೆಯೇ ;

(ಆ) ಇಂತಹವರುಗಳಿಗೆ ಮಂಜೂರಾದ ಜಮೀನುಗಳ ಬಗ್ಗೆ ಕರ್ನಾಟಕ ಭೂ ಕಂದಾಯ 1964ರ ವಿಧಿ 95(2)ರ ಅಡಿಯಲ್ಲಿ ಭೂ ಪರಿವರ್ತನೆಗೆ ಒಬ್ಬ ವ್ಯಕ್ತಿಯು ಅರ್ಜಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸುವಾಗ ಪಿ.ಟಿ.ಸಿ.ಎಲ್. ಕಾಯ್ದೆ ಉಲ್ಲಂಘನೆಯಾಗಿದೆಯೇ ಎಂಬ ಬಗ್ಗೆ ಉಪ ವಿಭಾಗಾಧಿಕಾರಿಗಳ ಕಛೇರಿಯಿಂದ ಹಿಂಬರಹ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕಾಗಿದ್ದು, ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರ ಅಡಿಯಲ್ಲಿ ಭೂಮಿ ಮಂಜೂರಾಗದೆ ಪಿತ್ರಾರ್ಜಿತ ಅಥವಾ ಸ್ವಂತ ಜಮೀನುಗಳನ್ನು

ಭೂ ಪರಿವರ್ತನೆ ಮಾಡಿಕೊಳ್ಳಲು ಅರ್ಜಿ ಸಲ್ಲಿಸುವಾಗ, ಜಿಲ್ಲಾಧಿಕಾರಿಗಳು ಇಂತಹ ಜಮೀನುಗಳಿಗೂ ಪಿ.ಟಿ.ಸಿ.ಎಲ್. ಕಾಯಿದೆಯಡಿ ಉಪವಿಭಾಗಾಧಿಕಾರಿಗಳಿಂದ ಹಿಂಬರಹ ಪಡೆದು ಲಗತ್ತಿಸಲು ನಿರ್ಬಂಧ ವಿಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಪಿತ್ರಾರ್ಜಿತ ಅಥವಾ ಸ್ವಂತ ಜಮೀನುಗಳಿಗೆ ಪಿ.ಟಿ.ಸಿ.ಎಲ್. ಹಿಂಬರಹ ಪಡೆದು ಲಗತ್ತಿಸಲು ನಿರ್ಬಂಧವನ್ನು ನಿಲ್ಲಿಸಿ, ವಿನಾಯಿತಿ ನೀಡಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನವನ್ನು ನೀಡುವುದೇ ? (ಸ್ಪಷ್ಟ ಉತ್ತರ ನೀಡುವುದು)